ಕರ್ನಾಟಕ ವಿಧಾನ ಸಭೆ
KARNATAKA LEGISLATIVE ASSEMBLY

ಶುಕ್ರವಾರ 15ನೇ ಮೇ 1998 ರಂದು

ಸದನವು ವಿಧಾನ ಸೌಧದಲ್ಲಿರುವ ವಿಧಾನಸಭೆಯ ಸಭಾಂಗಣದಲ್ಲಿ

ಬೆಳಿಗ್ಗೆ 10 ಗಂಟೆ 30 ನಿಮಿಷಕ್ಕೆ ಸಮಾವೇಶಗೊಂಡಿತು.

ಅಧ್ಯಕ್ಷರು : (ಶ್ರೀ ರಮೇಶ್ ಕುಮಾರ್) ಅವರು ಪೀಠದಲ್ಲಿ ಉಪಸ್ಥಿತರಿದ್ದರು.

ಸಂತಾಪ ಸೂಚನೆ

ಹಿರಿಯ ಸ್ವಾತಂತ್ರ್ಯ ಹೋರಾಟಗಾರರು ಹಾಗೂ ಪ್ರಜಾಪ್ರತಿನಿಧಿ ಸಭೆಯ ಸದಸ್ಯರಾಗಿದ್ದ ಶ್ರೀ ಟಿ.ಪಿ. ಬ್ರಹ್ಮಯ್ಯ ಅವರು, ದಿನಾಂಕ : 14ನೇ ಮೇ, 1998ರಂದು ನಿಧನರಾದುದನ್ನ ವಿಷಾದದಿಂದ ಈ ಸದನಕ್ಕೆ ತಿಳಿಸುತ್ತಿದ್ದೇನೆ.

ಶ್ರೀಯುತರು 1941 ರಿಂದ 1945ರ ವರೆಗೆ ಮೈಸೂರು ಪ್ರಜಾಪ್ರತಿನಿಧಿ ಸಭೆಯ ಸದಸ್ಯರಾಗಿದ್ದರು. ಹಾಗೂ 1952 ರಿಂದ 1958ರ ವರೆಗೆ ವಿಧಾನಪರಿಷತ್ತಿನ ಸದಸ್ಯರಾಗಿ ಸೇವೆ ಸಲ್ಲಿಸಿರುತ್ತಾರೆ.

ಮೃತರ ಗೌರವಾರ್ಥ ಮಾನ್ಯ ಸದಸ್ಯರುಗಳು ಎದ್ದು ನಿಂತು ಒಂದು ನಿಮಿಷ ಮೌನವನ್ನ ಆಚರಿಸಬೇಕೆಂದು ಕೋರುತ್ತೇನೆ.

(ಸಭೆಯು ಎದ್ದು ನಿಂತು ಒಂದು ನಿಮಿಷ ಮೌನವನ್ನು ಆಚರಿಸಿತು)

ಈ ಸಭೆಯು ಅಂಗೀಕರಿಸಿದ ಸಂತಾಪ ಸೂಚನಾ ನಿರ್ಣಯದ ಪ್ರತಿಯನ್ನು ಮೃತ ಕುಟುಂಬ ವರ್ಗದವರಿಗೆ ಕಳುಹಿಸಲಾಗುವುದು.

ಪ್ರಕಟಣೆ

ಅಧ್ಯಕ್ಷರು : ವಿಧಾನ ಪರಿಷತ್ತಿನ ಮಾನ್ಯ ಸಭಾಪತಿಯವರಿಂದ ಈ ಕೆಳಕಂಡ ಸಂದೇಶಗ ಬಂದಿರುತ್ತವೆ. ಕರ್ನಾಟಕ ವಿಧಾನಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆ ನಿಯಮ 11 ಮೇರೆಗೆ ವಿಧಾನ ಪರಿಷತ್ತು ದಿನಾಂಕ : 14ನೇ ಮೇ 1998 ರಂದು ಈ ಕೆಳಕಂಡ ವಿಧೇಯಕಗ ಯಾವುದೇ ತಿದ್ದುಪಡಿ ಇಲ್ಲದೆ ಅನುಮೋದನೆ ನೀಡಿದೆ. ಎಂದು ತಿಳಿಸಿದ್ದಾರೆ.

(1) ಕರ್ನಾಟಕ ಭೂ ಸುಧಾರಣೆಗಳ ತಿದ್ದುಪಡಿ ವಿಧೇಯಕ -1997.

(2) ಕರ್ನಾಟಕ ಭೂ ಕಂದಾಯ ತಿದ್ದುಪಡಿ ವಿಧೇಯಕ -1997.